**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವಾನ್ ಡಿ'ಸೋಜಾ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ**

**ಸೂಚನೆ** :

**ದ.ಕ., ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ವ್ಯಾಪ್ತಿಗೆ ಬರುವ ಉಚ್ಚ ನ್ಯಾಯಾಲಯ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪಿಸಲು ಸರ್ಕಾರ ಉಚ್ಚ ನ್ಯಾಯಾಲಯದೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆ ಬಗ್ಗೆ ಮಾನ್ಯ ಕಾನೂನು ಮತ್ತು ಸಂಸದೀಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.**

**ಸರ್ಕಾರದ ಉತ್ತರ** :

ಭಾರತ ಸಂವಿಧಾನದ ಅನುಚ್ಛೇದ 214ರಲ್ಲಿ ಪ್ರತಿ ರಾಜ್ಯಕ್ಕೆ ಒಂದು ಉನ್ನತ ನ್ಯಾಯಾಲಯ ಇರಬೇಕೆಂದು ಆಸ್ಪದವನ್ನು ಕಲ್ಪಿಸಲಾಗಿದೆ.

ರಾಜ್ಯ ಪುನರ್ ವಿಂಗಡನಾ ಕಾಯ್ದೆ 1956 (The State Re-organisation Act, 1956)ರ ಕಲಂ 51(3)ರನ್ವಯ, ಆಯಾ ರಾಜ್ಯಗಳ ಉಚ್ಚ ನ್ಯಾಯಾಲಯಗಳ ಮುಖ್ಯ ನ್ಯಾಯಮೂರ್ತಿಗಳು ಮಾನ್ಯ ರಾಜ್ಯಪಾಲರ ಅನುಮೋದನೆಯೊಂದಿಗೆ ರಾಜ್ಯದ ಇತರೆ ಯಾವುದೇ ಸ್ಥಳದಲ್ಲಿ ಸಂಚಾರಿ ಪೀಠವನ್ನು ವ್ಯವಸ್ಥೆಗೊಳಿಸಲು (sittings) ಅಧಿಕಾರ ಹೊಂದಿರುತ್ತಾರೆ. ಅದರಂತೆ, ರಾಜ್ಯ ಉಚ್ಚ ನ್ಯಾಯಾಲಯದ ದಿನಾಂಕ: 19.10.2004ರ ಅಧಿಸೂಚನೆಯನ್ವಯ ಕರ್ನಾಟಕ ರಾಜ್ಯದಲ್ಲಿ ಧಾರವಾಡ ಹಾಗೂ ಕಲಬುರಗಿ ಯಲ್ಲಿ ಉಚ್ಚ ನ್ಯಾಯಾಲಯದ ಸಂಚಾರಿ ಪೀಠಗಳನ್ನು ಆರಂಭಿಸಲಾಗಿದೆ.

ತರುವಾಯ, ಭಾರತದ ರಾಷ್ಟ್ರಪತಿಯವರ ದಿನಾಂಕ: 8.8.2013ರ ಆದೇಶದನ್ವಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ:23.08.2013ರ ಅಧಿಸೂಚನೆಯನ್ವಯ ರಾಜ್ಯದ ಗುಲ್ಬರ್ಗಾ ಹಾಗೂ ಧಾರವಾಡದ ಸಂಚಾರಿ ಪೀಠಗಳನ್ನು ಖಾಯಂ ಪೀಠಗಳನ್ನಾಗಿ ಸ್ಥಾಪಿಸಲಾಗಿದೆ.

ಪ್ರಸ್ತುತ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ಸಾರ್ವಜನಿಕರ ವ್ಯಾಜ್ಯಗಳನ್ನು ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿನ ಪ್ರಧಾನ ಪೀಠದಲ್ಲಿ ನಿರ್ವಹಿಸಲಾಗುತ್ತಿದೆ. ಪ್ರಸ್ತುತ ಈಗ ಇರುವ ವ್ಯವಸ್ಥೆಯಲ್ಲಿಯೇ ಈ ಭಾಗದ ವ್ಯಾಜ್ಯಗಳನ್ನು ಸಮರ್ಥವಾಗಿ ಸದರಿ ಪೀಠದಲ್ಲಿಯೇ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಡಿಪಿಎಆರ್ 97 ಎಸ್‌ಹೆಚ್‌ಸಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ.